ಅ) ರಾಜ್ಯದಲ್ಲಿನ ಜಿಲ್ಲೆಗಳನ್ನು ಪುನರ್ ರಚನೆ ಮಾಡುವ ಸಂಬಂಧ ಸಾಧಕ ಭಾಧಕಗಳನ್ನು ಪರಿಶೀಲಿಸಲು ಮೂರು ಸಮಿತಿಗಳನ್ನು ನೇಮಿಸಲಾಗಿತ್ತು. ಈ ಮೂರು ಸಮಿತಿಗಳ ವರದಿಯನಲ್ಲಿ ಚಿಕ್ಕೋಡಿ ನಗರವನ್ನು ಜಿಲ್ಲೆಯನ್ನಾಗಿ ಪರಿವರ್ತಿಸುವ ಬಗ್ಗೆ ಶಿಫಾರಸ್ಸು ಮಾಡಿರುವುದಿಲ್ಲ. ಆದ್ದರಿಂದ ಚಿಕ್ಕೋಡಿಯನ್ನು ಜಿಲ್ಲೆಯನ್ನಾಗಿ ಪರಿವರ್ತಿಸುವ ಯಾವುದೇ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಆ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಇ) -"-

ಬೈಲಹೊಂಗಲ ನಗರಕ್ಕೆ ಕೇಂದ್ರ ಸರ್ಕಾರದ ನೆರವಿನಿಂದ ಈಜುಕೊಳ ನಿರ್ಮಾಣ

1233(1448) ಶ್ರೀ ಕೌಜಲಗಿ ಮಹಾತೇಶ್ ಶಿವಾನಂದ(ಬೈಲಹೊಂಗಲ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಕೇಂದ್ರ ಸರ್ಕಾರದ ನೆರವಿನಿಂದ ಈಜುಕೊಳ ನಿರ್ಮಿಸುವ ಕಾರ್ಯ ಈಗ ಯಾವ ಹಂತದಲ್ಲಿದೆ?

ಆ) ಕೂಡಲೇ ಈಜುಕೊಳ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್(ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ಈಜುಕೊಳವನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಕೇಂದ್ರ ಸರ್ಕಾರದ ಅನುದಾನ ಪಡೆಯಲು ಕ್ರಮ ಜರುಗಿಸಲಾಗುತ್ತಿದೆ.

ಆ) ಹೌದು.

ಬೆಳಗಾವಿ ಜಿಲ್ಲೆಯ ಯುವಕ ಮಂಡಳಿಗಳಿಗೆ ಸಹಾಯಧನ

1234(1450) ಶ್ರೀ ಕೌಜಲಗಿ ಮಹಾತೇಶ್ ಶಿವಾನಂದ(ಬೈಲಹೊಂಗಲ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಯುವಕ ಮಂಡಳಿಗಳು ನೋಂದಾಯಿಸಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)?

ಆ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಎಷ್ಟು ಯುವಕ ಮಂಡಳಿಗಳು ನೋಂದಾಯಿಸಲಾಗಿದೆ? (ಅವುಗಳ ಹೆಸರು ಪೂರ್ಣ ವಿಳಾಸ ನೀಡುವುದು)?

ಇ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ನೋಂದಾಯಿಸಲ್ಪಟ್ಟ ಎಷ್ಟು ಯುವಕ ಮಂಡಳಿಗಳು ಅಸ್ತಿತ್ವದಲ್ಲಿರುತ್ತವೆ?

ಈ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಅಸ್ತಿತ್ವದಲ್ಲಿರುವ ಯುವಕ ಮಂಡಳಿಗಳಿಗೆ ಸರ್ಕಾರ ಯಾವ ಯಾವ ಸಹಾಯ ನೀಡಲಾಗುತ್ತಿದೆ? (ಅವುಗಳ ಪೂರ್ಣ ವಿಳಾಸ ನೀಡುವುದು)?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್(ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):